Fax: 08282-256262
E-mail:kuvempuacademic@gmail.com
Phone No - 08282-256149
Website: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ, ಜ್ಞಾನಸಹ್ಯಾದ್ರಿ,
ಶಂಕರಘಟ್ಟ – 577451, ಶಿವಮೊಗ್ಗ ಜಿಲ್ಲೆ, ಕರ್ನಾಟಕ.

ಸಂಖ್ಯೆ:ಕುವಿ:ಶೈವಿ:ಎಸಿ–4: 184 :2026–27 1488 ದಿನಾಂಕ:18 –07–2026

## ಪರಿಷ್ಕೃತ ಅಧಿಸೂಚನೆ

**ವಿಷಯ** : ವಿಶ್ವವಿದ್ಯಾಲಯದ 2026–27ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಭಾರತದ ಶಾಸ್ತ್ರೀಯ ಭಾಷೆಗಳಾದ ಸಂಸ್ಕೃತ, ಹಿಂದಿ ಮತ್ತು ಉರ್ದು ಸ್ನಾತಕೋತ್ತರ ಪದವಿ ಕೋರ್ಸ್‌ಗಳ ಪ್ರವೇಶಾತಿಗೆ ಅರ್ಜಿ ಆಹ್ವಾನಿಸುವ ಕುರಿತು.

ಉಲ್ಲೇಖ: 1. ಈ ಕಛೇರಿ ಅಧಿಸೂಚನೆ ಸಂಖ್ಯೆ:ಕುವಿ:ಶೈವಿ:ಎಸಿ–4:184 :1102:2026–27, ದಿನಾಂಕ:07–11–2022.
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:–18-07-2026

*****

ಕುವೆಂಪು ವಿಶ್ವವಿದ್ಯಾಲಯವು 2026–27ನೇ ಸಾಲಿಗೆ ವಿವಿಧ ಸ್ನಾತಕೋತ್ತರ ಪದವಿ, ಸ್ನಾತಕೋತ್ತರ ಡಿಪ್ಲೋಮಾ/ ಸರ್ಟಿಫಿಕೇಟ್ ಕೋರ್ಸ್‌ಗಳ ಪ್ರವೇಶಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಪ್ರವೇಶಾತಿ ಅರ್ಜಿಗಳನ್ನು ಉಲ್ಲೇಖಿತ (1)ರ ಅಧಿಸೂಚನೆಯಲ್ಲಿ ಆಫ್ ಲೈನ್ ಮೂಲಕ ಅರ್ಜಿ ಸಲ್ಲಿಸಲು **ದಿನಾಂಕ:27–07–2026ರವರೆಗೆ** ನಿಗದಿಗೊಳಿಸಿ ಆಹ್ವಾನಿಸಲಾಗಿತ್ತು.

ದಿನಾಂಕ:17–07–2026ರಂದು ಎಲ್ಲಾ ನಿಕಾಯಗಳ ಡೀನರು/ನಿರ್ದೇಶಕರು ಐ.ಕ್ಯೂ.ಎ.ಸಿ./ ಸಂಚಾಲಕರು ಅಲ್ಪ ಸಂಖ್ಯಾತರು ಮತ್ತು ಹಿಂದುಳಿದ ವರ್ಗ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕ ಇವರುಗಳ ಸಭೆಯಲ್ಲಿ ತೀರ್ಮಾನಿಸಿದಂತೆ ಹಾಗೂ ಉಲ್ಲೇಖಿತ (2)ರ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ 2026–27ನೇ ಶೈಕ್ಷಣಿಕ ಸಾಲಿನ ಸಹ್ಯಾದ್ರಿ ವಿಜ್ಞಾನ ಕಾಲೇಜು, ಸಹ್ಯಾದ್ರಿ ಕಲಾ ಕಾಲೇಜುಗಳಲ್ಲಿರುವ ಸ್ನಾತಕೋತ್ತರ ಕೋರ್ಸ್‌ಗಳನ್ನು ಜ್ಞಾನಸಹ್ಯಾದ್ರಿ ಆವರಣಕ್ಕೆ ಸ್ಥಳಾಂತರಿಸಿರುವಂತೆ ಭಾರತದ ಶಾಸ್ತ್ರೀಯ ಭಾಷೆಗಳಾದ ಸಂಸ್ಕೃತ ಮತ್ತು ಉರ್ದು ಸ್ನಾತಕೋತ್ತರ ಪದವಿ ಕೋರ್ಸ್‌ನ್ನು ಜ್ಞಾನಸಹ್ಯಾದ್ರಿ ಆವರಣಕ್ಕೆ ಸ್ಥಳಾಂತರಿಸಿ ಹಾಗೆಯೇ ಜ್ಞಾನಸಹ್ಯಾದ್ರಿ ಆವರಣದಲ್ಲಿರುವ ಭಾರತದ ಶಾಸ್ತ್ರೀಯ ಭಾಷೆಯಾದ ಹಿಂದಿ ಸ್ನಾತಕೋತ್ತರ ಪದವಿ ಪ್ರವೇಶಾತಿಗೆ ವಿದ್ಯಾರ್ಥಿಗಳಿಂದ **ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.**

ಉಳಿದಂತೆ, ಉಲ್ಲೇಖಿತ (1)ರ ಅಧಿಸೂಚನೆಯಲ್ಲಿ ನಿಗದಿಪಡಿಸಿರುವ ದಿನಾಂಕಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577 451.
ಶಿವಮೊಗ್ಗ ಜಿಲ್ಲೆ

ಗೆ,

1. ಎಲ್ಲಾ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರು, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ ಶಂಕರಘಟ್ಟ/ಶಿವಮೊಗ್ಗ
2. ಕುವೆಂಪು ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಶಿವಮೊಗ್ಗ/ ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ಘಟಕ/ ಸ್ನಾತಕೋತ್ತರ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.